ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಬೀದರ್ ಜಿಲ್ಲೆಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು) –

04 (49) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) 2017ರಲ್ಲಿ ಬೀದರ್ ನಗರಕ್ಕೆ ಇಂಜಿನಿಯರಿಂಗ್ ಕಾಲೇಜು ಮಂಜೂರಾಗಿದ್ದು, ಅದರ ಕಟ್ಟಡ ನಿರ್ಮಾಣ ಕಾರ್ಯ ಪ್ರಗತಿ ಯಾವ ಹಂತದಲ್ಲಿದೆ; ಅದಕ್ಕಾಗಿ ಎಷ್ಟು ಅನುದಾನ ಮೀಸಲಿಡಲಾಗಿದೆ; ಇಲ್ಲಿಯವರೆಗೆ ಎಷ್ಟು ಹಣ ಖರ್ಚು ಮಾಡಲಾಗಿದೆ; ಯಾವಾಗ ಪೂರ್ಣಗೊಳಿಸಲಾಗುವುದು;

(ಆ) ಸದರಿ ಕಾಲೇಜು ಬರುವ ಶೈಕ್ಷಣಿಕ ಸಾಲಿನಲ್ಲಿ ಆರಂಭಗೊಳ್ಳುವುದೇ; ಆರಂಭಗೊಳ್ಳುವುದಾದರೆ, ಅದಕ್ಕೇನಾದರೂ ಕಾಲಮಿತಿ ಹಾಕಿಕೊಳ್ಳಲಾಗಿದೆಯೇ;

(ಇ) ಬರುವ ಶೈಕ್ಷಣಿಕ ಸಾಲಿನಲ್ಲಿ ಕಾಲೇಜು ಆರಂಭವಾಗದಿದ್ದಲ್ಲಿ, ಇದಕ್ಕೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು?